Akashvani : Bangalore
Regional Bulletin In Kannada
17.09.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

- ಕಲ್ಯಾಣ ಕರ್ನಾಟಕದಲ್ಲಿ ರಸ್ತೆಗಳ ಅಭಿವೃದ್ಧಿಗೆ ಕಲ್ಯಾಣಪಥ ಯೋಜನೆ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಹಳ್ಳಿಗಳ ಸರ್ವತೋಮುಖ ಪ್ರಗತಿಗೆ ಕಾರ್ಯೋನ್ಮುಖರಾಗುವಂತೆ ಕೇಂದ್ರ ಸಚಿವ ವಿ. ಸೋಮಣ್ಣ ಕರೆ
- ಗುತ್ತಿಗೆದಾರನಿಗೆ ಜೀವ ಬೆದರಿಕೆ ಪ್ರಕರಣದಲ್ಲಿ ಶಾಸಕ ಮುನಿರತ್ನಗೆ ೧೪ ದಿನ ನ್ಯಾಯಾಂಗ ಬಂಧನ
- ಹುಬ್ಬಳ್ಳಿ-ಧಾರವಾಡದಲ್ಲಿ ಇಂದು ಗಣೇಶ ವಿಸರ್ಜನೆ - ಅವಳಿ ನಗರದಲ್ಲಿ ಬಿಗಿ ಭದ್ರತೆ

<><*<><>*><>

ಕಲಬುರಗಿ ನಗರವನ್ನು ೧ ಸಾವಿರದ ೬೮೫ ಕೋಟಿ ವೆಚ್ಚದಲ್ಲಿ ಸ್ಮಾರ್ಟ್ ಸಿಟಿಯನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಪೊಲೀಸ್ ಪರೇಡ್ ಮೈದಾನದಲ್ಲಿಂದು ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಮಹಾತ್ಮಾ ಗಾಂಧಿ ನಗರ ವಿಕಾಸ ಯೋಜನೆ ೨.೦ ಅಡಿಯಲ್ಲಿ ಕಲಬುರಗಿ ಮತ್ತು ಬಳ್ಳಾರಿ ಮಹಾನಗರ ಪಾಲಿಕೆಗಳಲ್ಲಿ ಮೂಲ ಸೌಕರ್ಯ ಅಭಿವೃದ್ಧಿಗೆ ತಲಾ ೨೦೦ ಕೋಟಿ ನೀಡಲಾಗುವುದು ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ರಸ್ತೆ ಸಂಪರ್ಕ ಮತ್ತು ಗ್ರಾಮೀಣಾಭಿವೃದ್ಧಿಯನ್ನು ಸುಧಾರಿಸಲು "ಕಲ್ಯಾಣ ಪಥ" ಯೋಜನೆಯನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಹೇಳಿದರು.

ಕಲ್ಯಾಣ ಪಥ ಯೋಜನೆಯಡಿ ರಾಜ್ಯ ಸರ್ಕಾರ ೧ ಸಾವಿರ ಕೋಟಿ ವೆಚ್ಚದಲ್ಲಿ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ೧ ಸಾವಿರ ೧೫೦ ಕಿ.ಮೀ ರಸ್ತೆಗಳನ್ನು ಅಭಿವೃದ್ಧಿಪಡಿಸಲು ನಿರ್ಧರಿಸಿದೆ. ರಾಯಚೂರಿನಲ್ಲಿ ಏಮ್ಸ್ ಸಂಸ್ಥೆ ಸ್ಥಾಪಿಸಲು ಅಗತ್ಯವಿರುವ ಎಲ್ಲ ನೆರವು ನೀಡಲು ಸರ್ಕಾರ ಸಿದ್ಧವಿದ್ದು, ಕೇಂದ್ರ ಸರ್ಕಾರ ತಕ್ಷಣ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ೨೦೨೪-೨೫ ರಲ್ಲಿ ಈ ಪ್ರದೇಶದ ಏಳು ಜಿಲ್ಲೆಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ೪ ಕೋಟಿ ೮೫ ಲಕ್ಷ ಮಾನವ ದಿನಗಳ ಕೆಲಸವನ್ನು ಸೃಜಿಸುವ ಗುರಿಯನ್ನು ರಾಜ್ಯ ಸರ್ಕಾರ ಹೊಂದಿದೆ. ಇಲ್ಲಿಯವರೆಗೆ, ೩.೪೩ ಕೋಟಿ ಮಾನವ

ದಿನಗಳನ್ನು ಸೃಜಿಸಲಾಗಿದ್ದು, ೧೩.೮೯ ಲಕ್ಷ ಜನರಿಗೆ ಉದ್ಯೋಗ ಒದಗಿಸಲಾಗಿದೆ ಎಂದು ವಿವರಿಸಿದರು. ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಅಂಜನಾದ್ರಿ ಬೆಟ್ಟ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸಲು ೧೦೦ ಕೋಟಿ ರೂಪಾಯಿ ನೀಡಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ಆಗಸ್ಟ್ ೨೨ ರಂದು ಮಾನ್ವಿ ತಾಲೂಕಿನ ಕುರಡಿ ಗ್ರಾಮದಲ್ಲಿ ನಡೆದಿದ್ದ ಸಂಜಯ್ ಕುರ್ಡಿಕರ್, ಕೊಲೆ ಪ್ರಕರಣದ ತನಿಖೆಯನ್ನು ಖುದ್ದು ಪರಿಶೀಲನೆ ನಡೆಸುವಂತೆ ರಾಯಚೂರು ಎಸ್‌ಪಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಕಲಬುರಗಿಯಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸುವ ವೇಳೆ ಕೊಲೆಯಾದ ಸಂಜಯ್ ಪತ್ನಿ ಶಾಂತಮ್ಮ, ಮುಖ್ಯಮಂತ್ರಿಯವರಿಗೆ ತನಿಖೆ ಕುರಿತಂತೆ ಮನವಿ ಮಾಡಿದರು. ಸ್ಥಳದಲ್ಲೇ ದೂರವಾಣಿ ಮೂಲಕ ರಾಯಚೂರು ಎಸ್‌ಪಿ ಅವರನ್ನು ಸಂಪರ್ಕಿಸಿದ ಮುಖ್ಯಮಂತ್ರಿಯವರು ಖುದ್ದಾಗಿ ತೆರಳಿ ಪರಿಶೀಲನೆ ನಡೆಸುವಂತೆ ಸೂಚನೆ ನೀಡಿದ್ದು, ಈ ಬಗ್ಗೆ ವರದಿ ನೀಡುವಂತೆ ಆದೇಶಿಸಿದರು.

<><*<><>*><>

ತುಮಕೂರು ತಾಲ್ಲೂಕಿನ ಬೆಳಗುಂಬ, ಸ್ವಾಂದೇನಹಳ್ಳಿ, ಗೂಳೂರು, ಹೆತ್ತೇನಹಳ್ಳಿ, ಹೆಗ್ಗೆರೆ ಈ ೫ ಪಂಚಾಯ್ತಿಗಳನ್ನು ಸಂಸದರ ಆದರ್ಶ ಗ್ರಾಮ ಯೋಜನೆಯಡಿ ದತ್ತು ತೆಗೆದುಕೊಳ್ಳುವಂತೆ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗೆ ಸೂಚನೆ ನೀಡಿದ್ದಾರೆ. ತುಮಕೂರು ಹೊರವಲಯದ ಬೆಳಗುಂಬದಲ್ಲಿ ಸ್ವಚ್ಛತೆಯೇ ಸೇವೆ-ಸ್ವಚ್ಛತೆಯೆಡೆ ದಿಟ್ಟ ಹೆಜ್ಜೆ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ೫ ಪಂಚಾಯ್ತಿಗಳಲ್ಲಿ ತಿಂಗಳಿಗೆ ೨-೩ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನರ ಮನೆ ಬಾಗಿಲಿಗೆ ಹೋಗುವ ಕೆಲಸವನ್ನು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮಾಡಬೇಕಾಗಿದೆ ಎಂದರು. ಗ್ರಾಮೀಣ ಭಾಗದ ಜನರ ಬದುಕು ಹಸನಾದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಈ ನಿಟ್ಟಿನಲ್ಲಿ ನಾವೆಲ್ಲರೂ ಹಳ್ಳಿಗಳ ಸರ್ವತೋಮುಖ ಪ್ರಗತಿಗೆ ಕಾರ್ಯೋನ್ಮುಖರಾಗಬೇಕು ಎಂದು ಕರೆ ನೀಡಿದರು.

ಧ್ವನಿ: ವಿ.ಸೋಮಣ್ಣ

<><*<><>*><>

ಗುತ್ತಿಗೆದಾರನಿಗೆ ಜೀವ ಬೆದರಿಕೆ ಮತ್ತು ಜಾತಿನಿಂದನೆ ಮಾಡಿದ ಆರೋಪದಲ್ಲಿ ಆರ್.ಆರ್. ನಗರ ಶಾಸಕ ಮುನಿರತ್ನ  ಅವರನ್ನು ಪರಪ್ಪನ ಅಗ್ರಹಾರ ಜೈಲಿಗೆ ಪೊಲೀಸರು ಕರೆದೊಯ್ದಿದ್ದಾರೆ.

ಎರಡು ದಿನ ಪೊಲೀಸ್ ಕಸ್ಟಡಿ ಮುಗಿದ ಹಿನ್ನೆಲೆಯಲ್ಲಿ ಮುನಿರತ್ನ ಅವರನ್ನು ಇವತ್ತು ನ್ಯಾಯಲಯಕ್ಕೆ ಹಾಜರುಪಡಿಸಲಾಗಿತ್ತು. ನ್ಯಾಯಾಲಯ ಅವರಿಗೆ ೧೪ ದಿನಗಳ ನ್ಯಾಯಾಂಗ ಬಂಧನ ವಿಧಿಸಿದೆ. ಇದೇ ವೇಳೆ ಶಾಸಕ ಮುನಿರತ್ನ ಅವರು ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದು, ಜಾಮೀನು ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶರು, ನಾಳೆವರೆಗೂ ಮುನಿರತ್ನ ಅವರನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

<><*<><>*><>

"ಎಲ್ಲರ ಮೇಲೂ ಸದಾ ಆರೋಪ ಮಾಡುವುದೇ ಬಿಜೆಪಿ ಕೆಲಸ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕಲಬುರ್ಗಿಯಲ್ಲಿ ಮಾತನಾಡಿದ ಅವರು "ಗಣಪತಿ ವಿಸರ್ಜನೆ ವೇಳೆ ಉಂಟಾಗಿರುವ ಗಲಭೆಗಳ ವಿರುದ್ಧ ಸರ್ಕಾರ ಕೂಡಲೇ ಕ್ರಮ ತೆಗೆದುಕೊಂಡಿದೆ. ತಪ್ಪಿತಸ್ಥರಿಗೆ ಶಿಕ್ಷೆ ನೀಡುವ ಕೆಲಸ ಸರ್ಕಾರ ಮಾಡುತ್ತದೆ ಎಂದರು. ಪರಪ್ಪನ ಅಗ್ರಹಾರ ಜೈಲಿನ ಮೇಲೆ ಪೊಲೀಸ್ ದಾಳಿ, ಗುತ್ತಿಗೆದಾರ ಚೆಲುವರಾಜು ಅವರಿಂದ ಶಾಸಕ ಮುನಿರತ್ನ ಅವರ ಮತ್ತೊಂದು ಆಡಿಯೋ ಬಿಡುಗಡೆ ಬಗ್ಗೆ ಪ್ರತಿಕ್ರಿಯಿಸಿ ಅಮೆರಿಕ ಪ್ರವಾಸದ ಹಿನ್ನೆಲೆಯಲ್ಲಿ ಯಾವ ವಿಚಾರಗಳ ಬಗ್ಗೆಯೂ ಮಾಹಿತಿ ಇಲ್ಲ ಎಂದು ತಿಳಿಸಿದರು.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಮೇಲ್ಸೆತುವೆ ಹಾಗೂ ಕೆಳಸೇತುವೆಗಳನ್ನು ಸರಿಯಾಗಿ ನಿರ್ವಹಣೆ ಮಾಡಬೇಕೆಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ವೀಡಿಯೋ ಸಂವಾದದ ಮೂಲಕ ಸಭೆ ನಡೆಸಿ ಮಾತನಾಡಿದ ಅವರು, ನಗರದಲ್ಲಿರುವ ಪಾದಚಾರಿ ಮೇಲುಸೇತುವೆಗಳಲ್ಲಿನ ಲಿಫ್ಟ್‌ಗಳನ್ನು ಸರಿಯಾಗಿ ನಿರ್ವಹಣೆ ಮಾಡುವಂತೆ ಸೂಚಿಸಿದ್ದಾರೆ. ಪಾಲಿಕೆ ವ್ಯಾಪ್ತಿಯ ಎಲ್ಲಾ ೮ ವಲಯಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತಿದ್ದು, ಆಯಾ ವಲಯಗಳಲ್ಲಿ ಇಂಜಿನಿಯರ್‌ಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಿದ್ದಾರೆ. ಬಾಕಿಯಿರುವ ರಸ್ತೆಗುಂಡಿಗಳನ್ನು ತ್ವರಿತವಾಗಿ ಮುಚ್ಚಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಪಾಲಿಕೆ ವ್ಯಾಪ್ತಿಯಲ್ಲಿ ಹೆಚ್ಚು ಆಸ್ತಿ ಬಾಕಿ ಉಳಿಸಿಕೊಂಡಿರುವ ಸುಸ್ತಿದಾರರಿಂದ ಆಸ್ತಿ ತೆರಿಗೆ ಸಂಗ್ರಹಿಸುವುದರ ಜೊತೆಗೆ ನಗರ ಕಸದ ಸಮಸ್ಯೆ ಬಗೆಹರಿಸಬೇಕು. ಬೀದಿ ದೀಪಗಳ ನಿರ್ವಹಣೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮೂರನೇ ಬಾರಿ ಅಧಿಕಾರಕ್ಕೆ ಬಂದು ಇಂದಿಗೆ ನೂರು ದಿನವಾಗಿದೆ. ವಿಕಸಿತ ಭಾರತ ಯೋಜನೆಯಡಿ ಪ್ರಧಾನಿ ಮೋದಿ, ನೂರು

ದಿನಗಳಲ್ಲಿ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ.  ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಪೂರಕ ವ್ಯವಸ್ಥೆಯನ್ನು ಬಲಪಡಿಸಲು ೧೦ ಸಾವಿರದ ೬೦೦ ಕೋಟಿ ವೆಚ್ಚದಲ್ಲಿ ವಿಜ್ಞಾನ ಧಾರ ಯೋಜನೆ, ಯುವಜನರಲ್ಲಿ ಕ್ರೀಡಪ್ರತಿಭೆ ಪ್ರೋತ್ಸಾಹಿಸಲು ಖೇಲೋ ಇಂಡಿಯಾ ರೈಸಿಂಗ್ ಟ್ಯಾಲೆಂಟ್ ಐಡೆಂಟಿಫಿಕೇಷನ್ ಕಾರ್ಯಕ್ರಮ ಪ್ರಾರಂಭಿಸಲಾಗಿದೆ.  ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳಾದ್ಯಂತ ಯುವಕರಿಗೆ ೧೫ ಸಾವಿರ ಸರ್ಕಾರಿ ಉದ್ಯೋಗಗಳಿಗೆ ನೇಮಕಾತಿ ಪತ್ರ ನೀಡಲಾಗಿದೆ. ಜಾಗತಿಕ ಉತ್ಪಾದನಾ ಕೇಂದ್ರವಾಗುತ್ತಿರುವ ದೇಶದ ಅಭಿವೃದ್ಧಿಗೆ ೨೮ ಸಾವಿರದ ೬೦೦ ಕೋಟಿ ಹೂಡಿಕೆಯೊಂದಿಗೆ ೧೨ ಕೈಗಾರಿಕಾ ಪಾರ್ಕ್‌ಗಳನ್ನು ಸ್ಥಾಪಿಸಲಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗ ಸೃಷ್ಟಿಗೆ ೧೧ ಕೋಟಿ ೧೧ ಲಕ್ಷ ಅನುದಿನ ವೆಚ್ಚ ಮಾಡಲಾಗಿದೆ.

<><*<><>*><>

ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಹನ್ನೊಂದನೇ ದಿನದ ಗಣಪತಿ ವಿಸರ್ಜನೆ ಹಿನ್ನೆಲೆಯಲ್ಲಿ ಮೂರು ಸಾವಿರಕ್ಕೂ ಹೆಚ್ಚು ಪೊಲೀಸ್ ನಿಯೋಜನೆ ಮಾಡಲಾಗಿದ್ದು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬಂದೋಬಸ್ತ್ ಮಾಡಲಾಗಿದೆ ಎಂದು ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮಿಷನರ್ ಎನ್.ಶಶಿಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಹತ್ತು ದಿನಗಳ ಕಾಲ ವಿಜೃಂಭಣೆಯಿಂದ ಗಣೇಶೋತ್ಸವ ಆಚರಣೆ ಮಾಡಿದ್ದು, ಇಂದು ವಿಸರ್ಜನೆಗೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ತಿಳಿಸಿದರು. ನೂರಕ್ಕೂ ಹೆಚ್ಚು ಗಣೇಶನ ಮೂರ್ತಿಗಳನ್ನು ವಿಸರ್ಜನೆ ಮಾಡಲಾಗುತ್ತಿದ್ದು, ಮೂರು ಸಾವಿರಕ್ಕೂ ಹೆಚ್ಚು ಪೊಲೀಸ್, ಕೆ.ಎಸ್.ಆರ್.ಪಿ, ರ್‍ಯಾಪಿಡ್ ಆಂಟಿಜನ್ ಫೋರ್ಸ್ ಸೇರಿದಂತೆ ವಿವಿಧ ಅಧಿಕಾರಿ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ. ಅಲ್ಲದೇ ಬಹುತೇಕ ಕಡೆಯಲ್ಲಿ ಸಿಸಿಟಿವಿ ಕಣ್ಣಾವಲು ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಬೆಳಗಾವಿ ಜಿಲ್ಲಾ ಆಡಳಿತ ಹಾಗೂ ಪಾಲಿಕೆಯಿಂದ ಸ್ವಚ್ಛತೆಯೇ ಸೇವೆ ವಿಶೇಷ ಅಂದೋಲನಕ್ಕೆ ಜಿಲ್ಲಾಧಿಕಾರಿ ಮಹಮ್ಮದ ರೋಷನ್ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಮೇಯರ್ ಸವಿತಾ ಕಾಂಬಳೆ ಸೇರಿದಂತೆ  ಅಧಿಕಾರಿಗಳು, ಶಾಲಾ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.  ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ದಿನದಿಂದ ದಿನಕ್ಕೆ ಕಸದ ಸಮಸ್ಯೆ ಹೆಚ್ಚಾಗುತ್ತಿದ್ದು, ಕಸವನ್ನು ಎಲ್ಲೆಂದರಲ್ಲಿ ಬಿಸಾಡದೆ ಸ್ವಚ್ಛತೆಯ ಬಗ್ಗೆ ಸಹಕರಿಸಬೇಕೆಂದು ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷ ಕರೆ ನೀಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಇಂದಿನಿಂದ ಅಕ್ಟೋಬರ್ ೨ ರವರೆಗೆ ಹಮ್ಮಿಕೊಂಡಿರುವ ’ಸ್ವಚ್ಛತಾ ಹೀ ಸೇವಾ ಪಾಕ್ಷಿಕ-೨೦೨೪

ಆಂದೋಲನ' ಕಾರ್ಯಕ್ರಮದ ಅಂಗವಾಗಿ  ದೇವನಹಳ್ಳಿಯಲ್ಲಿ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ವಿಶೇಷಚೇತನರ ಬೈಕ್ ಜಾಥಾಗೆ ಚಾಲನೆ ನೀಡಿದರು.

<><*<><>*><>

ಗದಗ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ಶಿಶು ಅಭಿವೃದ್ಧಿ ಯೋಜನೆ ಆಶ್ರಯದಲ್ಲಿ ಜಿಲ್ಲೆಯ ಚಿಕ್ಕೊಪ್ಪ ಗ್ರಾಮದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಜರುಗಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ  ಪದ್ಮಾವತಿ ಜಿ. ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಸೆಪ್ಟೆಂಬರ್ ತಿಂಗಳಿನಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಏಕ್ ಪೇಡ್ ಮಾ ಕೆ ನಾಮ್ ಕಾರ್ಯಕ್ರಮದ ಮೂಲಕ ಜಿಲ್ಲೆಯ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ಕೈಗೊಳ್ಳಲಾಗುವುದು ಎಂದು ಹೇಳಿದರು. ಗರ್ಭಿಣಿ ಬಾಣಂತಿಯರಲ್ಲಿನ ರಕ್ತಹೀನತೆ, ಅಪೌಷ್ಠಿಕತೆ ಹಾಗೂ ಇಲಾಖೆಯ ವಿವಿಧ ಯೋಜನೆಗಳ ಸೌಲಭ್ಯಗಳ ಕುರಿತು ಅವರು ಮಾಹಿತಿ ನೀಡಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ನಡೆದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ ಪುಷ್ಪ ನಮನ ಸಲ್ಲಿಸಿದರು. ಮಂಡ್ಯ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲಿ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ನಡೆಯಿತು. ವಿಶ್ವಕರ್ಮ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದ ಶಾಸಕ ರವಿಕುಮಾರ್ ಗಣಿಗ, ವಿಶ್ವಕರ್ಮ ಗುರುಗಳು ವಾಸ್ತು ಕಲೆಯನ್ನು ಪ್ರಪಂಚಕ್ಕೆ ಪರಿಚಯಿಸಿದ ಮೊದಲ ಇಂಜಿನಿಯರ್ ಆಗಿದ್ದು, ಇವರ ಸಾಧನೆ  ಹಾಗೂ ಕೊಡುಗೆ ಅಪಾರ ಎಂದು ತಿಳಿಸಿದರು. ಗದಗ ನಗರದ ವಿಶ್ವಕರ್ಮ ಸಮುದಾಯ ಭವನದಲ್ಲಿ ವಿಶ್ವಕರ್ಮ ಜಯಂತ್ಯೋತ್ಸವ ಕಾರ್ಯಕ್ರಮ ಜರುಗಿತು. ಗದಗ  ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಿ. ಆಕ್ಬರಸಾಬ್ ಕಾರ್ಯಕ್ರಮ ಉದ್ಘಾಟಿಸಿ, ಸರ್ಕಾರದ ಸೌಲಭ್ಯ ಪಡೆದುಕೊಂಡು ಅಭಿವೃದ್ಧಿ ಹೊಂದಬೇಕು ಎಂದು ತಿಳಿಸಿದರು. ಸೋಮನಾಥಪುರ ದೇವಾಲಯ ಸೇರಿದಂತೆ ವಿವಿಧ ದೇವಾಲಯ ಹಾಗೂ ಮೂರ್ತಿ, ಪ್ರತಿಮೆಗಳ ಕೆತ್ತನೆಯಲ್ಲಿ ವಿಶ್ವಕರ್ಮ ಸಮಾಜದವರ ಕೊಡುಗೆ ಅಪಾರ ಎಂದು ಸಾಹಿತಿ ಡಾ.ಜೆ.ಸೋಮಣ್ಣ ಕೊಡಗಿನಲ್ಲಿ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>